ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 1010

ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 21/09/2021

ಉತ್ತರಿಸುವವರು : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

ಕ್ರ.ಸ	ಪ್ರಶ್ನೆ	ಉತ್ತರ
ಅ)	ಪೌರಕಾರ್ಮಿಕ ಗೃಹಭಾಗ್ಯ ಯೋಜನೆಗೆ ವೆಚ್ಚ ಮಾಡಬೇಕಿದ್ದ ಮೊತ್ತವನ್ನು 2014-2018 ಅವಧಿಯಲ್ಲಿ ವಿವಿಧ ಬ್ಯಾಂಕ್‌ಗಳಲ್ಲಿ ಡಿಪಾಸಿಟ್ ಮಾಡಿರುವುದು, ಆರ್ಥಿಕ ಶಿಸ್ತಿನ ಉಲ್ಲಂಘನೆ ಮತ್ತು ಅಕ್ರಮವಲ್ಲವೇ; ಈ ಕುರಿತು ಸರ್ಕಾರದ ನಿಲುವೇನು;	ಪೌರಕಾರ್ಮಿಕ ಗೃಹಭಾಗ್ಯ ಯೋಜನೆಯಡಿ ಆಯವ್ಯಯದಲ್ಲಿ ಹಂಚಿಕೆ ಮಾಡಲಾದ ಅನುದಾನವನ್ನು ಸರ್ಕಾರದಿಂದ ನಿರ್ದೇಶನಾಲಯದ ಖಜಾನೆ ಖಾತೆಗೆ ಬಿಡುಗಡೆ ಮಾಡಲಾಗುತ್ತಿದ್ದು, ಸದರಿ ಖಜಾನೆ ಖಾತೆಯಲ್ಲಿ ಯಾವುದೇ ರೀತಿಯ ಬಡ್ಡಿ ಶೇಖರಣೆಯಾಗಿರುವುದಿಲ್ಲ. ಯೋಜನೆಯ ಕಾಮಗಾರಿಗಳ ಪ್ರಗತಿಯನುಸಾರ ಹಾಗೂ ಅನುದಾನದ ಬೇಡಿಕೆಯನುಸಾರ ನಗರ ಸ್ಥಳೀಯ ಸಂಸ್ಥೆಗಳ ನಗರ ಸ್ಥಳೀಯ ಸಂಸ್ಥೆಗಳ ಪ್ರತ್ಯೇಕ ಬ್ಯಾಂಕ್ ಖಾತೆಗಳಿಗೆ ಬಿಡುಗಡೆ ಮಾಡಲಾಗುತ್ತಿದೆ.
ಆ)	ಬ್ಯಾಂಕಿನಲ್ಲಿ ಡಿಪಾಸಿಟ್ ಮಾಡಿದ ಮೊತ್ತದಿಂದ ಗಳಿಸಿದ ಬಡ್ಡಿ ಮೊತ್ತ ರೂ.653.28 ಲಕ್ಷಗಳನ್ನು ಸರ್ಕಾರಕ್ಕೆ ಜಮೆ ಮಾಡದಿರಲು ಕಾರಣವೇನು; ಸದರಿ ಮೊತ್ತವನ್ನು ಸರ್ಕಾರಕ್ಕೆ ಜಮೆ ಮಾಡುವಲ್ಲಿ ವಿಳಂಬ ಮಾಡಿದ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;	2014-15 ರಿಂದ 2018-19ನೇ ಸಾಲಿನವರೆಗೆ ನಗರ ಸ್ಥಳೀಯ ಸಂಸ್ಥೆಗಳ ಪ್ರತ್ಯೇಕ ಬ್ಯಾಂಕ್ ಖಾತೆಗಳಲ್ಲಿ ರೂ.653.28 ಲಕ್ಷಗಳ ಬಡ್ಡಿ ಮೊತ್ತವು ಶೇಖರಣೆಯಾಗಿರುತ್ತದೆ. ಸದರಿ ಮೊತ್ತಕ್ಕೆ ಸಂಬಂಧಿಸಿದಂತೆ ಯಾವುದೇ ಅವ್ಯವಹಾರ ಆಗಿರುವುದಿಲ್ಲ.
ಇ)	ಸರ್ಕಾರಕ್ಕೆ ಸೇರಿದ ಮೊತ್ತವನ್ನು ಸರಿಯಾದ ಸಮಯಕ್ಕೆ ಜಮೆ ಮಾಡದಿರುವುದು ಹಾಗೂ ಸರ್ಕಾರವು ಸದರಿ ಮೊತ್ತವನ್ನು ಯಾವ ಉದ್ದೇಶಕ್ಕಾಗಿ ಬಳಕೆ ಮಾಡಲು ಆದೇಶ ನೀಡಿ ಬಿಡುಗಡೆ ಮಾಡಿದ್ದರೂ, ಆ ಉದ್ದೇಶಕ್ಕಾಗಿ ಸರಿಯಾದ ಸಮಯದಲ್ಲಿ ಬಳಕೆ ಮಾಡದಿರಲು ಅವ್ಯವಹಾರವಲ್ಲವೇ; ಈ ಕುರಿತು ಸರ್ಕಾರದ ನಿಲುವೇನು?	ಪ್ರಸ್ತುತ ಸದರಿ ಯೋಜನೆಯಡಿ ಕಾಮಗಾರಿಗಳು ಚಾಲ್ತಿಯಲ್ಲಿದ್ದು, ಎ.ಎಚ್.ಪಿ (ಗುಂಪು ಮನೆ) ಘಟಕದ ಕಾಮಗಾರಿಗಳ ಅಂದಾಜು ವೆಚ್ಚವು ಅಧಿಕವಾಗುವ ಸಾಧ್ಯತೆಗಳಿರುವುದರಿಂದ ಹೆಚ್ಚಿನ ಅನುದಾನದ ಅವಶ್ಯಕತೆ ಇರುತ್ತದೆ. ಖಾಯಂ ವಸತಿರಹಿತ ಪೌರಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸುವುದು ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾಗಿದ್ದು, ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಅನುದಾನ ಕೊರತೆಯಿಂದ ಯಾವುದೇ ವಿಳಂಬ ಉಂಟಾಗಬಾರದೆಂಬ ಸದುದ್ದೇಶದಿಂದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಂಗ್ರಹವಾಗಿರುವ ಬಡ್ಡಿ ಮೊತ್ತವನ್ನು ಸದರಿ ಯೋಜನೆಯ ಉದ್ದೇಶಕ್ಕಾಗಿಯೇ ಬಳಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ನಅಇ 198 ಜಿಇಎಲ್ 2021(ಇ)

ಎನ್. ನಾಗರಾಜು (ಎಂ.ಟಿ.ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು